# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬಾಲ್ಯವಿವಾಹವನ್ನು ತಡೆಯುವಲ್ಲಿ ಸಮರ್ಪಕವಾಗಿ ಕಾರ್ಯನಿರ್ವಹಿಸಲು ರಾಜ್ಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿಗಳನ್ನು ರಚಿಸಲು ಹಾಗೂ ಗ್ರಾಮ ಪಂಚಾಯತ್ ಮಟ್ಟದಲ್ಲಿ ಮಕ್ಕಳ ಹಕ್ಕುಗಳ ರಕ್ಷಣಾ ಸಮಿತಿಯನ್ನು ರಚಿಸುವ ಬಗ್ಗೆ.

**ಓದಲಾಗಿದೆ:**

ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಪತ್ರ ಸಂಖ್ಯೆಮಮಅಇ/ಮಕ/17/2011-12, ದಿನಾಂಕ:24.06.2013.

**ಪ್ರಸ್ತಾವನೆ:-**

ಬಾಲ್ಯ ವಿವಾಹ ನಿಷೇಧ ಕೋರ್ ಕಮಿಟಿಯ ವರದಿಯಲ್ಲಿ ಬಾಲ್ಯ ವಿವಾಹಗಳನ್ನು ತಡೆಯುವಲ್ಲಿ ಸಮರ್ಪಕವಾಗಿ ಕಾರ್ಯನಿರ್ವಹಿಸಲು ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿಗಳನ್ನು ರಚಿಸುವ ಬಗ್ಗೆ ಹಾಗೂ ಗ್ರಾಮ ಪಂಚಾಯತ್ ಮಟ್ಟದಲ್ಲಿ ಮಕ್ಕಳ ಹಕ್ಕುಗಳ ರಕ್ಷಣಾ ಸಮಿತಿಯ ರಚನೆಯ ಬಗ್ಗೆ ತಿಳಿಸಲಾಗಿದೆ. ಇದನ್ನು ಬಾಲ್ಯ ವಿವಾಹ ನಿಷೇಧ ನಿಯಮಗಳಲ್ಲಿ ಅಳವಡಿಸುವಂತೆ ತಿಳಿಸಲಾಗಿದೆ. ಆದರೆ, ಸದರಿ ಸಮಿತಿಗಳನ್ನು ರಚಿಸಲು ಅಧಿನಿಯಮದಲ್ಲಿ ಉಪಬಂಧ ಕಲ್ಪಿಸದಿರುವುದರಿಂದ, ಸಮಿತಿಗಳ ರಚನೆಯ ಅಂಶವನ್ನು ನಿಯಮದಲ್ಲಿ ಸೇರ್ಪಡಿಸುವುದನ್ನು ಕೈಬಿಟ್ಟು ರಾಜ್ಯದಲ್ಲಿ ಬಾಲ್ಯವಿವಾಹವನ್ನು ತಡೆಯಲು ಸಮರ್ಪಕವಾಗಿ ಕಾರ್ಯನಿರ್ವಹಿಸುವ ದೃಷ್ಟಿಯಿಂದ ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿಗಳನ್ನು ಮತ್ತು ಗ್ರಾಮ ಪಂಚಾಯತ್ ಮಟ್ಟದಲ್ಲಿ ಮಕ್ಕಳ ಹಕ್ಕುಗಳ ರಕ್ಷಣಾ ಸಮಿತಿಗಳನ್ನು ರಚಿಸಲು ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರು ಮೇಲೆ ಓದಲಾದ ದಿನಾಂಕ:24.06.2013ರ ಪತ್ರದಲ್ಲಿ ಕೋರಿರುತ್ತಾರೆ.

**ಆದೇಶ ಸಂಖ್ಯೆ: ಮಮಇ 105 ಮಮಅ 2013, ಬೆಂಗಳೂರು, ದಿನಾಂಕ:22.01.2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಬಾಲ್ಯ ವಿವಾಹ ನಿಷೇಧ ಕೋರ್ ಕಮಿಟಿಯ ವರದಿಯನ್ವಯ ಬಾಲ್ಯ ವಿವಾಹಗಳನ್ನು ತಡೆಯಲು ಸಮರ್ಪಕವಾಗಿ ಕಾರ್ಯನಿರ್ವಹಿಸುವ ದೃಷ್ಟಿಯಿಂದ ರಾಜ್ಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿಗಳನ್ನು ಹಾಗೂ ಗ್ರಾಮ ಪಂಚಾಯತ್ ಮಟ್ಟದಲ್ಲಿ ಮಕ್ಕಳ ಹಕ್ಕುಗಳ ರಕ್ಷಣಾ ಸಮಿತಿಗಳನ್ನು ಅನುಬಂಧ-1 ರಿಂದ 4 ರಲ್ಲಿರುವಂತೆ ರಚಿಸಲಾಗಿದೆ ಹಾಗೂ ಸದರಿ ಸಮಿತಿಗಳು ನಿರ್ವಹಿಸಬೇಕಾದ ಕರ್ತವ್ಯಗಳನ್ನು ಸಹ ಸೂಚಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಿ.ಕೆ.ಜಿರಲಿ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ

1092
27-1-14

**ಇವರಿಗೆ:**

1) ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು

3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ.
5) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ.
6) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ.
7) ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
8) ಅಧ್ಯಕ್ಷರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, 4ನೇ ಮಹಡಿ ಕೃಷಿಭವನ, ನೃಪತುಂಗರಸ್ತೆ, ಬೆಂ.
9) ಎಲ್ಲಾ ಜಿಲ್ಲಾಧಿಕಾರಿಗಳು.
10) ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
11) ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯಿತಿ. – 30
12) ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪ ನಿರ್ದೇಶಕರು. – 30
13) ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು. – 30
14) ಎಲ್ಲಾ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು. – 30
15) ಎಲ್ಲಾ ಮಹಾನಗರ ಪಾಲಿಕೆ / ನಗರ ಸಭೆಯ ಆಯುಕ್ತರು.
16) ಎಲ್ಲಾ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ. 30
17) ಎಲ್ಲಾ ತಹಶೀಲ್ದಾರರು.
18) ಎಲ್ಲಾ ಕಾರ್ಯನಿರ್ವಹಣಾಧಿಕಾರಿಗಳು, ತಾಲ್ಲೂಕು ಪಂಚಾಯತ್. – ~~30~~ 204
19) ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು. 204
20) ಎಲ್ಲಾ ತಾಲ್ಲೂಕು ವೈದ್ಯಾಧಿಕಾರಿಗಳು. 204
21) ಎಲ್ಲಾ ಸರ್ಕಲ್ ಪೊಲೀಸ್ ಇನ್‌ಸ್ಪೆಕ್ಟರ್‌ಗಳು. 204
22) ಎಲ್ಲಾ ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳು. 204
23) ಎಲ್ಲಾ ಪುರಸಭೆ / ಪಟ್ಟಣ ಪಂಚಾಯಿತಿಯ ಮುಖ್ಯ ಅಧಿಕಾರಿಗಳು. 30
24) ಎಲ್ಲಾ ಉಪ ನೋಂದಣಾಧಿಕಾರಿಗಳು.
25) ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು. – 204 842
26) ಎಲ್ಲಾ ಗ್ರಾಮ ಪಂಚಾಯಿತಿಯ ಅಧ್ಯಕ್ಷರು. 204
27) ಎಲ್ಲಾ ಪಂಚಾಯತ್ ಅಭಿವೃದ್ಧಿ ಅಧಿಕಾರಿ/ಗ್ರಾಮ ಪಂಚಾಯಿತಿ ಕಾರ್ಯದರ್ಶಿ. 1046
28) ಎಲ್ಲಾ ಕಂದಾಯ ನಿರೀಕ್ಷಕರು.
29) ಎಲ್ಲಾ ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನದ ಗ್ರಾಮ ಲೆಕ್ಕಿಗರು. (1150)
30) ಎಲ್ಲಾ ಗ್ರಾಮಪಂಚಾಯಿತಿ ವ್ಯಾಪ್ತಿಯ ಎಲ್ಲಾ ಸ್ಥಳೀಯ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು / ಶಿಕ್ಷಕರು.
~~31) ಶಾಖಾ ರಕ್ಷಾ ಕಡತ~~ / ಹೆಚ್ಚುವರಿ ಪ್ರತಿ.

(ಕ್ರಮ ಸಂಖ್ಯೆ:9 ರಿಂದ 30 ನಿರ್ದೇಶಕರ ಮುಖಾಂತರ)

<u>ಪ್ರತಿ:</u>

1. ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ & ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಉಪ ಕಾರ್ಯದರ್ಶಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ & ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು.

## ಅನುಬಂಧ-1

# ಬಾಲ್ಯ ವಿವಾಹಗಳನ್ನು ತಡೆಯುವ ರಾಜ್ಯ ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿ

ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು – ಅಧ್ಯಕ್ಷರು

ಸರ್ಕಾರದ ಪ್ರಧಾನ ಕಾರ್ಯದರ್ಶಿ, ಒಳಾಡಳಿತ ಇಲಾಖೆ – ಸದಸ್ಯರು

ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ – ಸದಸ್ಯರು

ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ – ಸದಸ್ಯರು

ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ – ಸದಸ್ಯರು

ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ – ಸದಸ್ಯರು

ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ – ಸದಸ್ಯರು

ಅಧ್ಯಕ್ಷರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ – ಸದಸ್ಯರು

5 ಪ್ರಮುಖ ಸ್ವಯಂ ಸೇವಾ ಸಂಸ್ಥೆಗಳು (ಸರ್ಕಾರದಿಂದ ನಾಮ ನಿರ್ದೇಶನ) – ಸದಸ್ಯರು

ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ & ಮಕ್ಕಳ ಅಭಿವೃದ್ಧಿ ಇಲಾಖೆ – ಸದಸ್ಯ ಕಾರ್ಯದರ್ಶಿ

## ಕರ್ತವ್ಯಗಳು:-

1) ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿಗಳಿಗೆ ಬಾಲ್ಯ ವಿವಾಹ ನಿಷೇಧ ಕುರಿತಂತೆ ಸಮರ್ಪಕವಾದ ನಿರ್ದೇಶನ ನೀಡತಕ್ಕದ್ದು.
2) ಬಾಲ್ಯ ವಿವಾಹ ನಿಷೇಧಕ್ಕೆ ಸಂಬಂಧಪಟ್ಟ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಲು ಅಗತ್ಯ ಸರ್ಕಾರಿ/ಆದೇಶಗಳು/ಸುತ್ತೋಲೆಗಳ/ಮಾರ್ಗ ಸೂಚಿಗಳನ್ನು ಹೊರಡಿಸತಕ್ಕದ್ದು.
3) ಸಮಿತಿಯು ಬಾಲ್ಯ ವಿವಾಹ ನಿಷೇಧದ ಪ್ರಕರಣದಲ್ಲಿ ಕೈಗೊಂಡ ಕ್ರಮದ ಮತ್ತು ನೊಂದವರಿಗೆ ಪುನರ್ವಸತಿ ಕಲ್ಪಿಸುವ ಬಗ್ಗೆ ಹಾಗೂ ಬಾಲ್ಯ ವಿವಾಹ ನಿಷೇಧದ ಪ್ರಕ್ರಿಯೆಯಲ್ಲಿ ಪಾಲ್ಗೊಂಡ ಕುಟುಂಬಗಳಿಗೆ/ಆಯೋಜಕರಿಗೆ ಶಿಕ್ಷೆಗೆ ಒಳಪಡಿಸುವಲ್ಲಿ ಮತ್ತು ನಿಷೇಧಾಧಿಕಾರಿಗಳು ಕರ್ತವ್ಯದಲ್ಲಿ ಲೋಪವೆಸಗಿದ್ದಲ್ಲಿ ತೆಗೆದುಕೊಂಡ ಕ್ರಮಗಳ ಬಗ್ಗೆ ಪರಿಶೀಲಿಸುವುದು.
4) ಬಾಲ್ಯ ವಿವಾಹ ನಿಷೇಧ ಕುರಿತಂತೆ ಜಿಲ್ಲಾ ಮಟ್ಟದ ಕಾರ್ಯನಿರ್ವಹಣೆಯ ಬಗ್ಗೆ ಪ್ರತಿ 6 ತಿಂಗಳಿಗೊಮ್ಮೆ ಪರಿಶೀಲಿಸುವುದು.

# ಅನುಬಂಧ-2

# ಬಾಲ್ಯ ವಿವಾಹಗಳನ್ನು ತಡೆಯುವ ಜಿಲ್ಲಾ ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿ

ಜಿಲ್ಲಾಧಿಕಾರಿಗಳು – ಅಧ್ಯಕ್ಷರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು – ಸಹ ಅಧ್ಯಕ್ಷರು.

ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯಿತಿ – ಸದಸ್ಯರು.

ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು –ಸದಸ್ಯರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು – ಸದಸ್ಯರು.

ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು – ಸದಸ್ಯರು.

ಮಹಾನಗರ ಪಾಲಿಕೆ/ನಗರ ಸಭೆಯ ಆಯುಕ್ತರು – ಸದಸ್ಯರು.

ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸಕ್ರಿಯವಾಗಿ ಕೆಲಸ ಮಾಡುತ್ತಿರುವ 2 ಸ್ವಯಂ ಸೇವಾ ಸಂಸ್ಥೆಗಳು (ಸಮಿತಿಯ ಅಧ್ಯಕ್ಷರಿಂದ ನಾಮ ನಿರ್ದೇಶನ) – ಸದಸ್ಯರು

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು – ಸದಸ್ಯ ಕಾರ್ಯದರ್ಶಿ

## ಕರ್ತವ್ಯಗಳು:–

1) ಸಾರ್ವಜನಿಕರಲ್ಲಿ ಬಾಲ್ಯ ವಿವಾಹ ನಿಷೇಧದ ಬಗ್ಗೆ ಅರಿವು ಮೂಡಿಸುವುದು, ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಮಟ್ಟದ ಅಧಿಕಾರಿಗಳಿಗೆ ವಿಷಯದ ಬಗ್ಗೆ ಮನವರಿಕೆ ಮಾಡಿಕೊಡುವುದು.
2) ಬಾಲ್ಯ ವಿವಾಹ ನಿಷೇಧಿಸಲು ಜಿಲ್ಲಾ ಮಟ್ಟದಲ್ಲಿ ಕ್ರಿಯಾ ಯೋಜನೆಯನ್ನು ರೂಪಿಸಿಕೊಂಡು ಅದರಂತೆ ಚಟುವಟಿಕೆಗಳನ್ನು ಹಮ್ಮಿಕೊಳ್ಳುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
3) ತಾಲ್ಲೂಕು ಮತ್ತು ಗ್ರಾಮ ಮಟ್ಟದ ಸಮಿತಿಗಳಿಗೆ ಬಾಲ್ಯ ವಿವಾಹದ ಪ್ರಕರಣಗಳನ್ನು ನಡೆಸುವ ಬಗ್ಗೆ ಸಹಕಾರ ನೀಡುವುದು.
4) ಸಮಿತಿಯು ಬಾಲ್ಯ ವಿವಾಹದಿಂದ ನೊಂದವರಿಗೆ ಪುನರ್ವಸತಿ, ಆಸರೆಗಾಗಿ ಯೋಜನೆಯನ್ನು ರೂಪಿಸಿ, ಅದರಲ್ಲಿ ವಿದ್ಯಾಭ್ಯಾಸ ಮುಂದುವರೆಸಲು, ವೃತ್ತಿ ತರಬೇತಿ, ಆಪ್ತ ಸಮಾಲೋಚನೆ ಮತ್ತು ಉಚಿತ ವೈದ್ಯಕೀಯ ನೆರವು ಮುಂತದಾವುಗಳನ್ನು ನೀಡಲು ಮತ್ತು ಕುಟುಂಬದ ಆರ್ಥಿಕ ಪರಿಸ್ಥಿತಿಯನ್ನು ಉತ್ತಮಪಡಿಸಲು ಶ್ರಮಿಸುವುದು.
5) ಸಾಮೂಹಿಕ ವಿವಾಹ ಆಯೋಜಿಸುವ ವಿಧಿ ವಿಧಾನಗಳನ್ನು ಆಯೋಜಕರು ಕಡ್ಡಾಯವಾಗಿ ಪಾಲಿಸುತ್ತಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು ಮತ್ತು ಸಾಮೂಹಿಕ ವಿವಾಹಗಳಲ್ಲಿ ನಡೆಯುವ ವಿವಾಹಗಳ ನೊಂದಣಿಯ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು.
6) ಬಾಲ್ಯ ವಿವಾಹ ನಿಷೇಧದ ಅಧಿಕಾರಿಗಳು ಕರ್ತವ್ಯದಲ್ಲಿ ವಿಫಲರಾದಲ್ಲಿ ಅಥವಾ ನಿರ್ಲಕ್ಷ್ಯತೆ ತೋರಿದಲ್ಲಿ ಅಂತವರ ಮೇಲೆ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸುವುದು.
7) ತಾಲ್ಲೂಕು ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿಯು ವರದಿಯನ್ನು 3 ತಿಂಗಳಿಗೊಮ್ಮೆ ಪರಿಶೀಲಿಸುವುದು.

<u>ಅನುಬಂಧ-3</u>

# ಬಾಲ್ಯ ವಿವಾಹಗಳನ್ನು ತಡೆಯುವ ತಾಲ್ಲೂಕು ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿ

ತಹಶೀಲ್ದಾರರು – ಅಧ್ಯಕ್ಷರು

ಕಾರ್ಯನಿರ್ವಹಣಾಧಿಕಾರಿಗಳು, ತಾಲ್ಲೂಕು ಪಂಚಾಯತ್ – ಸದಸ್ಯರು

ಕ್ಷೇತ್ರ ಶಿಕ್ಷಣಾಧಿಕಾರಿಗಳು – ಸದಸ್ಯರು

ತಾಲ್ಲೂಕು ವೈದ್ಯಾಧಿಕಾರಿಗಳು – ಸದಸ್ಯರು

ಸರ್ಕಲ್ ಪೊಲೀಸ್ ಇನ್‌ಸ್ಪೆಕ್ಟರ್ – ಸದಸ್ಯರು

ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿ – ಸದಸ್ಯರು

ಪುರಸಭೆ/ಪಟ್ಟಣ ಪಂಚಾಯಿತಿಯ ಮುಖ್ಯ ಅಧಿಕಾರಿಗಳು – ಸದಸ್ಯರು.

ಉಪ ನೊಂದಣಾಧಿಕಾರಿಗಳು – ಸದಸ್ಯರು

ಮಕ್ಕಳ/ಮಹಿಳಾ ಕಲ್ಯಾಣ ಕ್ಷೇತ್ರದಲ್ಲಿ ಸಕ್ರಿಯವಾಗಿ ಕೆಲಸ ಮಾಡುತ್ತಿರುವ 1 ಸ್ವಯಂ ಸೇವಾ ಸಂಸ್ಥೆ (ಸಮಿತಿಯ ಅಧ್ಯಕ್ಷರಿಂದ ನಾಮ ನಿರ್ದೇಶನ) – ಸದಸ್ಯರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು – ಸದಸ್ಯ ಕಾರ್ಯದರ್ಶಿ

<u>ಕರ್ತವ್ಯಗಳು:–</u>

1) ಬಾಲ್ಯ ವಿವಾಹಗಳು ಹೆಚ್ಚಾಗಿ ನಡೆಯುವ ಸೂಕ್ಷ್ಮ ಗ್ರಾಮಗಳನ್ನು ಗುರುತಿಸುವುದು.
2) ಬಾಲ್ಯ ವಿವಾಹಗಳು ನಡೆಯುವ ಸಮುದಾಯ/ಜಾತಿ/ದೇವಸ್ಥಾನ/ಸ್ಥಳ/ಆಯೋಜಕರ ಮಾಹಿತಿಯನ್ನು ನಿರ್ವಹಿಸುವುದು.
3) ತಾಲ್ಲೂಕುಗಳಲ್ಲಿ ಜನಿಸುವ ಮಕ್ಕಳ ಮತ್ತು ನಡೆಯುವ ಮದುವೆಗಳ ಬಗ್ಗೆ ಪರಿಶೀಲಿಸುವುದು.
4) ಬಾಲ್ಯ ವಿವಾಹದ ನಿಷೇಧದ ಕುರಿತು ಅರಿವು ಮೂಡಿಸುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
5) ಸಮಿತಿಯು ಬಾಲ್ಯ ವಿವಾಹಗಳನ್ನು ತಡೆದ ಸಂಖ್ಯೆ, ಬಾಲ್ಯ ವಿವಾಹಗಳು ನಡೆದ ಸಂಖ್ಯೆ ಮತ್ತು ದೂರುಗಳು ದಾಖಲಾಗಿರುವ ಬಗ್ಗೆ ಪರಿಶೀಲನೆ, ತದನಂತರ ಜಿಲ್ಲಾ ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿಗೆ ~~ವರದಿ ಮಾಡುವುದು.~~
6) ಸಮಿತಿಯು ಬಾಲ್ಯ ವಿವಾಹದಿಂದ ನೊಂದವರಿಗೆ ಪುನರ್ವಸತಿ, ಅಸರೆಗಾಗಿ ಯೋಜನೆಯನ್ನು ರೂಪಿಸಿ, ಅದರಲ್ಲಿ ವಿದ್ಯಾಭ್ಯಾಸ ಮುಂದುವರೆಸಲು, ವೃತ್ತಿ ತರಬೇತಿ, ಆಪ್ತ ಸಮಾಲೋಚನೆ ಮತ್ತು ಉಚಿತ ವೈದ್ಯಕೀಯ ನೆರವು ಮುಂತಾದವುಗಳನ್ನು ನೀಡಲು ಮತ್ತು ಕುಟುಂಬದ ಆರ್ಥಿಕ ಪರಿಸ್ಥಿತಿಯನ್ನು ಉತ್ತಮಪಡಿಸಲು ಶ್ರಮಿಸುವುದು.
7) ಸಮಿತಿಯು ಗ್ರಾಮಮಟ್ಟದ ಮಕ್ಕಳ ಹಕ್ಕುಗಳ ರಕ್ಷಣಾ ಸಮಿತಿಗೆ ಅವಶ್ಯಕತೆಯಿದ್ದಾಗ ಸಂದರ್ಭಾನುಸಾರವಾಗಿ ಸಹಾಯ ನೀಡುವುದು.
8) ಸಮಿತಿಯು ಸಕ್ರಿಯ ಸ್ವಯಂ ಸೇವಾ ಸಂಸ್ಥೆಗಳನ್ನು ಗುರುತಿಸಿ, ಬಾಲ್ಯ ವಿವಾಹ ನಿಷೇಧದಲ್ಲಿ ತೊಡಗಿಸಿಕೊಳ್ಳುವುದು.
9) ಸಮಿತಿಯು ಶಾಲೆಗಳಲ್ಲಿ ಮಕ್ಕಳ ಹಕ್ಕುಗಳ ಕ್ಲಬ್‌ಗಳು ಸ್ಥಾಪನೆಯಾಗಿರುವ ಬಗ್ಗೆ ಮತ್ತು ಸದರಿ ಕ್ಲಬ್‌ಗಳ ಕಾರ್ಯಕ್ರಮಗಳ ಬಗ್ಗೆ ಪರಿಶೀಲಿಸುವುದು.

10) ಸಮಿತಿಯು ಬಾಲ್ಯ ವಿವಾಹ ನಿಷೇಧದಲ್ಲಿ ಪ್ರಕರಣ ದಾಖಲಿಸಿದ್ದಲ್ಲಿ ತಾಲ್ಲೂಕು/ಜಿಲ್ಲಾ ಬಾಲ್ಯ ವಿವಾಹ ನಿಷೇಧ ಅಧಿಕಾರಿಗಳಿಗೆ ಸೂಕ್ತ ದಾಖಲೆಗಳನ್ನು ಒದಗಿಸಲು ಸಹಾಯ ನೀಡುವುದು.
11) ಬಾಲ್ಯ ವಿವಾಹ ನಿಷೇಧಾಧಿಕಾರಿಗಳು ಬಾಲ್ಯ ವಿವಾಹ ನಿಷೇಧ ಸಂದರ್ಭದಲ್ಲಿ ಕರ್ತವ್ಯಲೋಪವೆಸಗಿದಲ್ಲಿ ಶಿಸ್ತು ಕ್ರಮಗಳಿಗಾಗಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿಗೆ, ಶಿಫಾರಸ್ಸು ಮಾಡುವುದು.
12) ಸಮಿತಿಯು 3 ತಿಂಗಳಿಗೆ ಒಮ್ಮೆ ಮತ್ತು ಅಗತ್ಯವಿದ್ದ ಸಂದರ್ಭದಲ್ಲಿ ಸಭೆ ಸೇರತಕ್ಕದ್ದು.
13) ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ತಾಲ್ಲೂಕು ಮಟ್ಟದಲ್ಲಿ ಹಮ್ಮಿಕೊಳ್ಳುವುದು.
14) ಗ್ರಾಮ ಪಂಚಾಯಿತಿ ಮಟ್ಟದ ಮಕ್ಕಳ ಹಕ್ಕುಗಳ ರಕ್ಷಣಾ ಸಮಿತಿಗಳ ವರದಿಗಳ ಪರಿವೀಕ್ಷಣೆ ಮಾಡುವುದು

## ಅನುಬಂಧ-4

## ಬಾಲ್ಯ ವಿವಾಹಗಳನ್ನು ತಡೆಯುವ ಗ್ರಾಮ ಪಂಚಾಯಿತಿ ಮಟ್ಟದ ಮಕ್ಕಳ ಹಕ್ಕುಗಳ ರಕ್ಷಣಾ ಸಮಿತಿ

ಗ್ರಾಮ ಪಂಚಾಯಿತಿಯ ಅಧ್ಯಕ್ಷರು- ಅಧ್ಯಕ್ಷರು

ಕಂದಾಯ ನಿರೀಕ್ಷಕರು (ಒಬ್ಬರನ್ನು ಈ ಸಭೆಗೆ ಹಾಜರಾಗಲು ತಹಶೀಲ್ದಾರರು ನೇಮಿಸುವುದು)-ಸದಸ್ಯರು

ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನದ ಗ್ರಾಮ ಲೆಕ್ಕಿಗರು - ಸದಸ್ಯರು

ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಸ್ಥಳೀಯ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು/ಶಿಕ್ಷಕರು-ಸದಸ್ಯರು

ಗ್ರಾಮ ಪಂಚಾಯಿತಿ ವ್ಯಾಪ್ತಿಯ ಐ.ಸಿ.ಡಿ.ಎಸ್ ಮೇಲ್ವಿಚಾರಕಿ-ಸದಸ್ಯರು

ಎಲ್.ಹೆಚ್.ವಿ/ಎ.ಎನ್.ಎಮ್ (ಎಲ್.ಹೆಚ್.ವಿ.ಗಳು ಲಭ್ಯವಿಲ್ಲದಿದ್ದ ಪಕ್ಷದಲ್ಲಿ ಎ.ಎನ್.ಎಮ್‌ಗಳನ್ನು ತಾಲ್ಲೂಕು ವೈದ್ಯಾಧಿಕಾರಿಗಳು ನಾಮ ನಿರ್ದೇಶನ ಮಾಡುವುದು) - ಸದಸ್ಯರು

ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಂಗನವಾಡಿ ಕಾರ್ಯಕರ್ತೆಯರು (ಗ್ರಾಮಕ್ಕೆ ಒಬ್ಬರಂತೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಆಯ್ಕೆ ಮಾಡುವುದು) -ಸದಸ್ಯರು

ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರು ನಾಮ ನಿರ್ದೇಶನ ಮಾಡುವ ಶಾಲೆಯ ಒಂದು ಹುಡುಗ ಮತ್ತು ಹುಡುಗಿ-ಸದಸ್ಯರು.

ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ತೊಡಗಿಸಿಕೊಂಡಿರುವ ಒಬ್ಬ ಸಮಾಜ ಕಾರ್ಯಕರ್ತ (ಸಮಿತಿಯು ಆಯ್ಕೆ ಮಾಡಿ ಗುರುತಿಸಬೇಕು) - ಸದಸ್ಯರು.

ಪಂಚಾಯತ್ ಅಭಿವೃದ್ಧಿ ಅಧಿಕಾರಿ/ಗ್ರಾಮ ಪಂಚಾಯಿತಿ ಕಾರ್ಯದರ್ಶಿ - ಸದಸ್ಯ ಕಾರ್ಯದರ್ಶಿ.

### ಸಮಿತಿಯ ಕರ್ತವ್ಯಗಳು:-

1. ಸಮಿತಿಯು ವಿವಾಹಗಳು/ಬಾಲ್ಯ ವಿವಾಹಗಳು ಹೆಚ್ಚಾಗಿ ನಡೆಯುವ ಪ್ರದೇಶಗಳನ್ನು ದೇವಸ್ಥಾನಗಳನ್ನು ಗುರುತಿಸುವುದು.
2. ಸಾಮೂಹಿಕ ವಿವಾಹ ಆಯೋಜಕರ ಮಾಹಿತಿ, ಪ್ರಖ್ಯಾತ ವ್ಯಕ್ತಿಗಳ ಮಾಹಿತಿ, 18 ವರ್ಷದೊಳಗಿನ ಹೆಣ್ಣು ಮತ್ತು 21 ವರ್ಷದೊಳಗಿನ ಗಂಡು ಮಕ್ಕಳ ಮಾಹಿತಿಗಳನ್ನು ಸಮಿತಿಯು ಹೊಂದಿರಬೇಕು.
3. ಗ್ರಾಮದಲ್ಲಿ ಜನಿಸುವ ಎಲ್ಲಾ ಮಕ್ಕಳ ಮತ್ತು ಗ್ರಾಮದಲ್ಲಿ ನಡೆಯುವ ಎಲ್ಲಾ ಮದುವೆಗಳ ನೊಂದಣಿಯ ಬಗ್ಗೆ ಖಾತ್ರಿಪಡಿಸಿಕೊಳ್ಳಬೇಕು.
4. ಬಾಲ್ಯ ವಿವಾಹ ನಿಷೇಧ ಕುರಿತು, ದುಷ್ಪರಿಣಾಮಗಳ ಕುರಿತು ಮತ್ತು ಬಾಲ್ಯ ವಿವಾಹ ನಿಷೇಧದ ಕಾನೂನಿನ ಅರಿವಿನ ಬಗ್ಗೆ ವ್ಯಾಪಕ ಪ್ರಚಾರ ಕೈಗೊಳ್ಳಬೇಕು.
5. ಗ್ರಾಮದಲ್ಲಿ ಯಾವುದೇ ಬಾಲ್ಯ ವಿವಾಹ ನಡೆಯುತ್ತಿರುವುದು ಕಂಡು ಬಂದಲ್ಲಿ ಕೂಡಲೇ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಯವರ ಗಮನಕ್ಕೆ ತಂದು ಎಫ್.ಐ.ಆರ್. ಒಳಗೊಂಡಂತೆ ಅಗತ್ಯ ಕ್ರಮ ಕೈಗೊಳ್ಳುವುದು.

6. ತಾಲ್ಲೂಕು / ಜಿಲ್ಲಾ ಮಟ್ಟದ ಬಾಲ್ಯ ವಿವಾಹ ನಿಷೇಧಾಧಿಕಾರಿಗಳಿಗೆ ಬಾಲ್ಯ ವಿವಾಹ ನಿಷೇಧದ ಬಗ್ಗೆ ಪ್ರಕರಣ ದಾಖಲಿಸಲು ಅಗತ್ಯ ದಾಸ್ತಾವೇಜುಗಳನ್ನು ಒದಗಿಸುವುದು.
7. ಸಮಿತಿಯು ಎರಡು ತಿಂಗಳಿಗೊಮ್ಮೆ ಅಥವಾ ಅಗತ್ಯವಿದ್ದಾಗ ಸಭೆ ಸೇರಬೇಕು.

## ಸಮಿತಿಯ ಸದಸ್ಯರ ಕರ್ತವ್ಯಗಳು

### a) ಅಂಗನವಾಡಿ ಕಾರ್ಯಕರ್ತೆಯರು:-

1) 0 ಯಿಂದ 18 ವರ್ಷದೊಳಗಿನ ಎಲ್ಲಾ ಮಕ್ಕಳ ಮಾಹಿತಿಯನ್ನು ನಿರ್ವಹಿಸುವುದು. ಶಾಲೆಬಿಟ್ಟ ಮತ್ತು ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಸಬಲಾ ಕಾರ್ಯಕ್ರಮದಲ್ಲಿ ಅಳವಡಿಸಿಕೊಳ್ಳವುದು. ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು ಸಮೀಕ್ಷಾ ವಹಿಯನ್ನು ನಿರ್ವಹಿಸುವುದು. ಅದರಲ್ಲಿ ಮಕ್ಕಳ ಮಾಹಿತಿಯನ್ನು ವಯಸ್ಸಿನೊಂದಿಗೆ ನಿರ್ವಹಿಸುವುದರಿಂದ ಬಾಲ್ಯ ವಿವಾಹವನ್ನು ತಡೆಗಟ್ಟಲು ಹಾಗೂ ಇತರೆ ಮಕ್ಕಳಿಗೆ ಇತರೆ ಕಾರ್ಯಕ್ರಮಗಳ ಯೋಜನೆ ರೂಪಿಸಲು ಅನುವಾಗುವುದು.
2) ಆರೋಗ್ಯ ಇಲಾಖೆಯ ಶುಶ್ರೂಷಕರು/ದಾದಿಗಳು/ಆಶಾ ಕಾರ್ಯಕರ್ತೆಯರೊಂದಿಗೆ ಗ್ರಾಮದಲ್ಲಿ ಆಗುವ ಪ್ರತಿಯೊಂದು ಜನನದ ಬಗ್ಗೆ ಗ್ರಾಮ ಲೆಕ್ಕಿಗರೊಂದಿಗೆ ಪರಿಶೀಲಿಸಿ, ಹೊಂದಾಣಿಕೆ ಮಾಡಿಕೊಳ್ಳುವುದು. ಇದರಿಂದ ಮದುವೆಯ ಸಮಯದಲ್ಲಿ ಜನನ ಪ್ರಮಾಣ ಪತ್ರವನ್ನು ಹಾಜರುಪಡಿಸುವುದರಿಂದ ಬಾಲ್ಯ ವಿವಾಹವನ್ನು ತಡೆಗಟ್ಟಬಹುದು.
3) ಅಂಗನವಾಡಿ ಕಾರ್ಯಕರ್ತೆಯರು ಕಿಶೋರಿ ಶಕ್ತಿ ಮತ್ತು ಸ್ವಸಹಾಯ ಗುಂಪುಗಳಿಗೆ ಮಕ್ಕಳ ಹಕ್ಕುಗಳ ರಕ್ಷಣೆಯ ಬಗ್ಗೆ ಅರಿವು ಮೂಡಿಸಲು ಸಹಕರಿಸುವುದು.
4) ಬಾಲ್ಯ ವಿವಾಹಗಳು ನಡೆಯುವುದು ಕಂಡು ಬಂದ ಸಂದರ್ಭದಲ್ಲಿ ಪೋಷಕರು/ಮಕ್ಕಳು/ಹಿರಿಯರೊಂದಿಗೆ ಸಮಾಲೋಚನೆ ನಡೆಸುವುದು. ಬಾಲ್ಯ ವಿವಾಹ ನಿಷೇಧಾಧಿಕಾರಿಗಳಿಗೆ ಬಾಲ್ಯ ವಿವಾಹ ತಡೆಯಲು ಸಹಕರಿಸುವುದು.
5) ತನ್ನ ಕಾರ್ಯಕ್ಷೇತ್ರದಲ್ಲಿ ಯಾವುದೇ ಬಾಲ್ಯ ವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
6) ಬಾಲ್ಯ ವಿವಾಹ ನಡೆಯುತ್ತಿರುವುದು ಕಂಡು ಬಂದಲ್ಲಿ ತಕ್ಷಣ ಮೇಲಾಧಿಕಾರಿಗಳ ಗಮನಕ್ಕೆ ತರುವುದು ಮತ್ತು ಮಾಹಿತಿದಾರರ ಹೆಸರನ್ನು ಗೌಪ್ಯವಾಗಿಡುವುದು.
7) ಬಾಲ್ಯ ವಿವಾಹದಿಂದ ನೊಂದವರಿಗೆ ಕಾನೂನಿನನ್ವಯ ರಾಜ್ಯ/ಕೇಂದ್ರ ಸರ್ಕಾರದ ಯೋಜನೆಗಳಡಿಯಲ್ಲಿ ಪುನರ್ವಸತಿ ಕಲ್ಪಿಸಿಕೊಡುವುದು.
8) ಪ್ರತಿ 2 ತಿಂಗಳಿಗೊಮ್ಮೆ ತಪ್ಪದೆ ಸಭೆಗಳಿಗೆ ಹಾಜರಾಗುವುದು ಮತ್ತು ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಅನುಪಾಲನೆ ಮಾಡುವುದು.
9) ವೃತ್ತ ಮೇಲ್ವಿಚಾರಕಿಯರಿಗೆ ಬಾಲ್ಯ ವಿವಾಹಗಳನ್ನು ಒಳಗೊಂಡಂತೆ ಮಾಹಿತಿಯನ್ನು ಪ್ರತಿ ತಿಂಗಳು ವರದಿ ಮಾಡತಕ್ಕದ್ದು.
10) ಬಾಲ್ಯ ವಿವಾಹ ನಡೆಯುವ ಸಂದರ್ಭದಲ್ಲಿ ಗ್ರಾಮಲೆಕ್ಕಿಗರಿಗೆ ದೂರು ನೀಡುವುದು.

### b) ಎ.ಎನ್.ಎಮ್/ಆಶಾ ಕಾರ್ಯಕರ್ತೆಯರು:-

1. ಗ್ರಾಮದಲ್ಲಿ ಜನಿಸಿದ ಮಕ್ಕಳ ನೋಂದಣಿಯನ್ನು ಗ್ರಾಮಲೆಕ್ಕಿಗರು ಮಾಡಿರುವ ಬಗ್ಗೆ ಖಾತ್ರಿ ಮಾಡಿಕೊಳ್ಳುವುದು.
2. ಮಹಿಳೆಯರಿಗೆ ಮತ್ತು ಹದಿಹರೆಯದ ಹೆಣ್ಣು ಮಕ್ಕಳಿಗೆ ಬಾಲ್ಯ ವಿವಾಹದಿಂದ ಆರೋಗ್ಯದ ಮೇಲಾಗುವ ದುಷ್ಪರಿಣಾಮಗಳನ್ನು ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮದಲ್ಲಿ ಅರಿವು ಮೂಡಿಸುವುದು.
3. ಬಾಲ್ಯ ವಿವಾಹಗಳು ನಡೆಯುವುದು ಕಂಡು ಬದ ಸಂದರ್ಭದಲ್ಲಿ ಪೋಷಕರು / ಮಕ್ಕಳು / ಹಿರಿಯರೊಂದಿಗೆ ಸಮಾಲೋಚನೆ ನಡೆಸುವುದು. ಬಾಲ್ಯ ವಿವಾಹ ನಿಷೇಧಾಧಿಕಾರಿಗಳಿಗೆ ಬಾಲ್ಯ ವಿವಾಹ ತಡೆಯಲು ಸಹಕರಿಸುವುದು.
4. ತನ್ನ ಕಾರ್ಯಕ್ಷೇತ್ರದಲ್ಲಿ ಯಾವುದೇ ಬಾಲ್ಯ ವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.

5. ಬಾಲ್ಯ ವಿವಾಹ ನಡೆಯುತ್ತಿರುವುದು ಕಂಡು ಬಂದಲ್ಲಿ ತಕ್ಷಣ ಮೇಲಾಧಿಕಾರಿಗಳ ಗಮನಕ್ಕೆ ತರುವುದು ಮತ್ತು ಮಾಹಿತಿದಾರರ ಹೆಸರನ್ನು ಗೌಪ್ಯವಾಗಿಡುವುದು.
6. ಪ್ರತಿ 2 ತಿಂಗಳಿಗೊಮ್ಮೆ ಸಭೆಗಳಿಗೆ ಹಾಜರಾಗುವುದು ಮತ್ತು ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಅನುಪಾಲನೆ ಮಾಡುವುದು.
7. ಪ್ರತಿ ತಿಂಗಳು ಮಾಹಿತಿಯನ್ನು ಮಹಿಳಾ ಆರೋಗ್ಯ ಸಂದರ್ಶಕರಿಗೆ ನೀಡುವುದು.

c) <u>ಮುಖ್ಯೋಪಾಧ್ಯಾಯರು/ಶಿಕ್ಷಕರು:-</u>

1) ಮಗುವನ್ನು ಶಾಲೆಯಲ್ಲಿ ಉಳಿಸಿಕೊಳ್ಳಲು ಪ್ರಯತ್ನಿಸುವುದು.
2) ಶಾಲೆ ಬಿಟ್ಟ ಮಕ್ಕಳ ಬಗ್ಗೆ ಅದರಲ್ಲೂ ಮುಖ್ಯವಾಗಿ ಋತುಮಾನದ ವಲಸೆಯಿಂದಾಗಿ ಶಾಲೆ ಬಿಡುವ ಮಕ್ಕಳ ಬಗ್ಗೆ ಅಂಗನವಾಡಿ ಕಾರ್ಯಕರ್ತೆಯರ ಸಹಾಯದಿಂದ ಅನುಪಾಲನೆ ಮಾಡುವುದು.
3) ಮಕ್ಕಳ ಗೈರು ಹಾಜರಿ ಬಗ್ಗೆ ನಿಗಾ ವಹಿಸುವುದು, ಮಗು 3 ದಿನಕ್ಕಿಂತ ಜಾಸ್ತಿ ದಿನಗಳ ಕಾಲ ಶಾಲೆಗೆ ಗೈರುಹಾಜರಾದಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಸಹಾಯದಿಂದ ಅಂತಹ ಮಕ್ಕಳ ಪೋಷಕರನ್ನು ಭೇಟಿ ಮಾಡಿ ಮಗುವನ್ನು ವಾಪಸ್ ಶಾಲೆಗೆ ಕರೆಯಿಸುವ ಬಗ್ಗೆ ಕ್ರಮ ವಹಿಸುವುದು,
4) ಸುತ್ತೋಲೆಯಲ್ಲಿರುವಂತೆ ಶಾಲೆಗಳಲ್ಲಿ ಮಕ್ಕಳ ಹಕ್ಕುಗಳ ಕ್ಲಬ್‌ಗಳನ್ನು ರಚಿಸುವುದು, ಮಕ್ಕಳನ್ನು ಬಾಲ್ಯ ವಿವಾಹದಿಂದುಂಟಾಗುವ ದುಷ್ಪರಿಣಾಮಗಳ ಬಗ್ಗೆ ತಿಳಿಯಲು ಮತ್ತು ಬಾಲ್ಯ ವಿವಾಹ ನಡೆಸಿದಲ್ಲಿ ದೊರೆಯುವ ಶಿಕ್ಷೆಯ ಬಗ್ಗೆ ಅರಿವು ಮೂಡಿಸಲು ಸಕ್ರಿಯವಾಗಿ ಭಾಗವಹಿಸುವಂತೆ ಪ್ರೋತ್ಸಾಹಿಸುವುದು.
5) ಶಾಲೆಯಲ್ಲಿ ಪ್ರತಿ ತಿಂಗಳು ಮೌಲ್ಯಾಧಾರಿತ ಶಿಕ್ಷಣದ ತರಗತಿಗಳನ್ನು ನಡೆಸುವ ಮೂಲಕ ಸಾಮಾಜಿಕ ಜವಾಬ್ದಾರಿಗಳನ್ನು ಉತ್ತೇಜಿಸುವುದು ಮತ್ತು ಮಕ್ಕಳ ಹಕ್ಕುಗಳ ಬಗ್ಗೆ ಮಕ್ಕಳಿಗೆ. ಅರಿವು ಮೂಡಿಸುವುದು.
6) ಬಾಲ್ಯ ವಿವಾಹಗಳು ನಡೆಯುವುದು ಕಂಡು ಬಂದ ಸಂದರ್ಭದಲ್ಲಿ ಪೋಷಕರು/ಮಕ್ಕಳು/ಹಿರಿಯರೊಂದಿಗೆ ಸಮಾಲೋಚನೆ ನಡೆಸುವುದು ಬಾಲ್ಯ ವಿವಾಹ ನಿಷೇಧಾಧಿಕಾರಿಗಳಿಗೆ ಬಾಲ್ಯ ವಿವಾಹ ತಡೆಯಲು ಸಹಕರಿಸುವುದು.
7) ತನ್ನ ಕಾರ್ಯಕ್ಷೇತ್ರದಲ್ಲಿ ಯಾವುದೇ ಬಾಲ್ಯ ವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
8) ಸಮುದಾಯದಿಂದ ಬಾಲ್ಯ ವಿವಾಹದ ಬಗ್ಗೆ ಮಾಹಿತಿ ದೊರೆತ ತಕ್ಷಣ ಗ್ರಾಮದ ಗ್ರಾಮ ಲೆಕ್ಕಿಗರಿಗೆ ಮಾಹಿತಿ ನೀಡುವುದು. ಮಾಹಿತಿದಾರರ ಹೆಸರನ್ನು ಗೌಪ್ಯವಾಗಿಡುವುದು.
9) ಕ್ಷೇತ್ರ ಶಿಕ್ಷಣಾಧಿಕಾರಿಗೆ ಮೇಲಿನ ವಿಷಯಗಳನ್ವಯ ಪ್ರತಿ ತಿಂಗಳು ವರದಿ ಮಾಡುವುದು ಹಾಗೂ ಸಭೆಗಳಿಗೆ ತಪ್ಪದೇ ಹಾಜರಾಗುವುದು.

d) <u>ಗ್ರಾಮ ಲೆಕ್ಕಿಗರು:-</u>

1) ಅಂಗನವಾಡಿ ಕಾರ್ಯಕರ್ತೆಯರು/ಎ.ಎನ್.ಎಮ್/ಆಶಾ ಕಾರ್ಯಕರ್ತೆಯರುಗಳ ಸಹಕಾರದೊಂದಿಗೆ ಪ್ರತಿ ಗ್ರಾಮದಲ್ಲಿ ಜನಿಸುವ ಮಕ್ಕಳ ನೊಂದಣಿ ಮತ್ತು ಜನನ ಪ್ರಮಾಣ ಪತ್ರ ವಿತರಿಸುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
2) ತನ್ನ ಕಾರ್ಯ ವ್ಯಾಪ್ತಿಯಲ್ಲಿ ನಡೆದ ಎಲ್ಲಾ ಮದುವೆಗಳ (ಬಾಲ್ಯ ವಿವಾಹ ಹೊರತುಪಡಿಸಿ) ನೊಂದಣಿಯನ್ನು ಕಡ್ಡಾಯವಾಗಿ ಮಾಡಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
3) ಸಾಮೂಹಿಕ ವಿವಾಹ/ವೈಯುಕ್ತಿಕ ವಿವಾಹಗಳಲ್ಲಿ ಬಾಲ್ಯ ವಿವಾಹ ನಡೆಯುವ ಬಗ್ಗೆ ದೂರು ಬಂದಲ್ಲಿ ತಕ್ಷಣ ಸೂಕ್ತ ಕ್ರಮ ಕೈಗೊಂಡು, ಬಾಲ್ಯ ವಿವಾಹ ನಿಷೇಧ ಕಾಯ್ದೆಯನ್ವಯ ಬಾಲ್ಯ ವಿವಾಹ ತಡೆಯುವ ಬಗ್ಗೆ ಕ್ರಮ ವಹಿಸುವುದು.
4) ಸಾಮೂಹಿಕ ವಿವಾಹಗಳು ನಡೆಯುವ ಸ್ಥಳದಲ್ಲಿ ಖುದ್ದು ಹಾಜರಿದ್ದು, ಯಾವುದೇ ಬಾಲ್ಯ ವಿವಾಹ ನಡೆಯದಂತೆ ಸ್ಥಳದಲ್ಲಿಯೇ ವಿವಾಹಗಳನ್ನು (ಬಾಲ್ಯ ವಿವಾಹ ಹೊರತುಪಡಿಸಿ) ಕಡ್ಡಾಯವಾಗಿ ನೊಂದಣಿ ಮಾಡುವುದು.
5) ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ ಎಂದು ಸಾರ್ವಜನಿಕರಿಗೆ ಮಾಹಿತಿ ನೀಡುವ ಫಲಕಗಳನ್ನು ಸಾಮೂಹಿಕ ವಿವಾಹ ನಡೆಯುವ ಸ್ಥಳಗಳಲ್ಲಿ ಪ್ರದರ್ಶಿಸಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು. ಫಲಕದಲ್ಲಿರುವ ಮಾಹಿತಿಯು ನಿಗದಿತ ಮಾರ್ಗ ಸೂಚಿಯಂತೆ ಇರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.

…ಲ್ಯ ವಿವಾಹಕ್ಕೆ ಸಂಬಂಧಿಸಿದ ಮಾಸಿಕ ಸಭೆಗಳಿಗೆ ತಪ್ಪದೇ ಹಾಜರಾಗುವುದು.

…) ರಾಜಸ್ವ ನಿರೀಕ್ಷಕರು/ತಹಶಿಲ್ದಾರರಿಗೆ ಬಾಲ್ಯವಿವಾಹದ ಮಾಹಿತಿಯನ್ನು ಒಳಗೊಂಡಂತೆ ಪ್ರತಿ ತಿಂಗಳು ಮಾಹಿತಿ ನೀಡುವುದು ಹಾಗೂ ಸಭೆಗಳಿಗೆ ತಪ್ಪದೇ ಹಾಜರಾಗುವುದು.

**ಇ) ಮಕ್ಕಳು:-**

1) ಬಾಲ ಕಾರ್ಮಿಕತೆ ಅಥವಾ ಬಾಲ್ಯ ವಿವಾಹದಿಂದಾಗಿ ಶಾಲೆ ಬಿಟ್ಟ ಮಕ್ಕಳ ಮಾಹಿತಿಯನ್ನು ಶಾಲೆಯ ಮುಖ್ಯೋಪಾಧ್ಯಾಯರಿಗೆ/ಶಿಕ್ಷಕರಿಗೆ ಮಕ್ಕಳು ಮಾಹಿತಿ ನೀಡತಕ್ಕದ್ದು.
2) ಬಾಲ್ಯ ವಿವಾಹದ ಬಗ್ಗೆ ಮಾಹಿತಿಯು ತಿಳಿದು ಬಂದಾಗ ಶಾಲಾ ಮುಖ್ಯೋಪಾಧ್ಯಾಯರಿಗೆ/ಶಾಲಾ ಶಿಕ್ಷಕರಿಗೆ/ ಗ್ರಾಮ ಲೆಕ್ಕಿಗರಿಗೆ/ಅಂಗನವಾಡಿ ಕಾರ್ಯಕರ್ತೆಯರಿಗೆ ಬಾಲ್ಯ ವಿವಾಹ ತಡೆಯಲು …ಗುವುದು.

…ಕ್ಕಳ ಗ್ರಾಮ ಸಭೆ ಮತ್ತು ಮಕ್ಕಳ ಹಕ್ಕುಗಳ ಕ್ಲಬ್‌ಗಳಲ್ಲಿ ಮಕ್ಕಳು ಸಕ್ರಿಯವಾಗಿ ಭಾಗವಹಿಸುವುದು.

ಸರ್ಕಾರದ ಅಧೀನ ಕಾರ್ಯದರ್ಶಿ-1

ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ

ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ